<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ</u>
**<u>ಸಿ.ಸಿ.2029/2025</u>**

| | | |
|---|---|---|
| ಸಾಕ್ಷಿದಾರರ ಹೆಸರು | : ಶಿವಣ್ಣ | ಫ್ರಾಸಾ-2 |
| ತಂದೆಯ ಹೆಸರು | : ಮುಳ್ಳಯ್ಯ | ಚಾಸಾ-2 |
| ವಯಸ್ಸು | : 58 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ 15.12.2025 |
| ವಾಸಸ್ಥಳ | : ಹಳಸೆ | |

<u>:ಮುಖ್ಯ ವಿಚಾರಣೆ: ಫ್ರಾಜ್ಞ್ಯಾ.ಸ.ಸ.ಅ. ರವರಿಂದ:</u>

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿದೆ. ಚಾಸಾ-1 ರವರು ನನ್ನ ಮಗ.

ಸಾಕ್ಷಿಯು ನಿಪಿ-2 ರ ಮಹಜರ್ ಮತ್ತು ನಿಪಿ-3 ರ ಮಾದರಿ ಸೀಲಿನ ನಕಲಿನಲ್ಲಿ ತಮ್ಮ ಹೆಬ್ಬೆಟ್ಟಿನ ಗುರುತನ್ನು ನೋಡಿ ಗುರುತಿಸಿ, ನಿಪಿ-4 ರಿಂದ 8 ರ ಫೋಟೋಗಳಲ್ಲಿ ತಾವು ಇರುವ ಬಗ್ಗೆ ಗುರುತಿಸುತ್ತಾರೆ. ಸಾಕ್ಷಿಯ ಹೆಬ್ಬೆಟ್ಟಿನ ಗುರುತನ್ನು ನಿಪಿ-2(ಬಿ) ಮತ್ತು 3(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಎಂ.ಒ.1 ಮತ್ತು 2 ರ ಮೇಲೆ ತಮ್ಮ ಹೆಬ್ಬೆಟ್ಟಿನ ಗುರುತನ್ನು ಗುರುತಿಸಿ ಸದರಿ ಬಾಟಲ್ ಗಳ ಬಗ್ಗೆ ತಮಗೆ ಯಾವುದೇ ಮಾಹಿತಿ ಇಲ್ಲ ಎಂದು ನುಡಿಯುತ್ತಾರೆ. ಸಾಕ್ಷಿಯ ಹೆಬ್ಬೆಟ್ಟಿನ ಗುರುತುಗಳನ್ನು ಎಂ.ಒ.1(ಬಿ) ಮತ್ತು 2(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ದಿ.28.03.2025 ರ ನೋಟೀಸ್ ನಲ್ಲಿ ತಮ್ಮ ಹೆಬ್ಬೆಟ್ಟಿನ ಗುರುತನ್ನು ನೋಡಿ ಗುರುತಿಸಿದ್ದು, ಸದರಿ ನೋಟೀಸನ್ನು ನಿಪಿ-12, ಸಾಕ್ಷಿಯ ಹೆಬ್ಬೆಟ್ಟಿನ ಗುರುತನ್ನು ನಿಪಿ-12(ಎ) ಎಂದು ಗುರುತಿಸಲಾಯಿತು.

6 ತಿಂಗಳ ಹಿಂದೆ ನಾನು ಮತ್ತು ನನ್ನ ಮಗ ಚಾಸಾ-1 ರವರು ಮೂಡಿಗೆರೆ ಪೇಟೆಗೆ ಬಂದಿದ್ದಾಗ ಅಬಕಾರಿ ಅಧಿಕಾರಿಗಳು ನನ್ನ ಹೆಬ್ಬೆಟ್ಟಿನ ಗುರುತನ್ನು ಪಡೆದು, ಫೋಟೋಗಳನ್ನು ತೆಗೆದಿದ್ದಾರೆ. ಯಾವ ವಿಚಾರಕ್ಕೆ ನನ್ನ ಹೆಬ್ಬೆಟ್ಟಿನ ಗುರುತನ್ನು ಪಡೆದು ಫೋಟೋಗಳನ್ನು ತೆಗೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ಮೇಲೆ ಹೇಳಿದ ಸಮಯಕ್ಕೆ ಎಂ.ಒ.1 ಮತ್ತು 2 ರ ವಸ್ತುವನ್ನು ನೋಡಿಲ್ಲ. ನಿಪಿ-2, 3 ಮತ್ತು 12 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಅಬಕಾರಿ ಅಧಿಕಾರಿಗಳು ನನ್ನ ಸಮಕ್ಷಮ ಏನನ್ನು ವಶಕ್ಕೆ ಪಡೆದಿಲ್ಲ. ನಾನು ಅಬಕಾರಿ ಅಧಿಕಾರಿಗಳ ಮುಂದೆ ನನ್ನ ಹೇಳಿಕೆಯನ್ನು ದಾಖಲಿಸಿಕೊಂಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಫ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

<u>ಪಾಟೀ ಸವಾಲು: ಫ್ರಾಜ್ಞ್ಯಾ.ಸ.ಸ.ಅ. ರವರಿಂದ:</u>

ಈಗ ಓದಿ ಹೇಳಿದಂತೆ ದಿ.11.04.2025 ರಂದು ಅಬಕಾರಿ ಅಧಿಕಾರಿಗಳ ಮುಂದೆ ನನ್ನ ಹೇಳಿಕೆ ದಾಖಲಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಪಿ-13 ಎಂದು ಗುರುತಿಸಲಾಯಿತು.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.</u>**
**<u>ಮರು ವಿಚಾರಣೆ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ</u>
<u>ಸಿ.ಸಿ.2029/2025</u>

| | | |
|---|---|---|
| ಸಾಕ್ಷಿದಾರರ ಹೆಸರು | : ಪ್ರವೀಣ್ | ಫ್ರಾಸಾ-1 |
| ತಂದೆಯ ಹೆಸರು | : ಶಿವಣ್ಣ | ಚಾಸಾ-1 |
| ವಯಸ್ಸು | : 25 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ 15.12.2025 |
| ವಾಸಸ್ಥಳ | : ಹಳಸೆ | |

<u>:ಮುಖ್ಯ ವಿಚಾರಣೆ: ಫ್ರಾಜ್ಞ್ಯಾ.ಸ.ಸ.ಅ. ರವರಿಂದ:</u>

ನ್ಯಾಯಾಲಯದ ಮುಂದಿರುವ ಆರೋಪಿಯ ಪರಿಚಯ ನನಗಿದೆ. ಚಾಸಾ-2 ರವರು ನನ್ನ ತಂದೆ.

ಸಾಕ್ಷಿಯು ದಿ.28.03.2025 ರ ನೋಟೀಸು, ಮಹಜರ್, ಮಾದರಿ ಸೀಲಿನ ನಕಲಿನಲ್ಲಿ ತಮ್ಮ ಸಹಿಗಳನ್ನು ಗುರುತಿಸಿ, ಐದು ಫೋಟೋಗಳಲ್ಲಿ ತಾವು ಇರುವ ಬಗ್ಗೆ ಗುರುತಿಸುತ್ತಾರೆ. ನೋಟೀಸನ್ನು ನಿಪಿ-1, ಮಹಜರ್ ನ್ನು ನಿಪಿ-2, ಮಾದರಿ ಸೀಲಿನ ನಕಲನ್ನು ನಿಪಿ-3, ಸಾಕ್ಷಿಯ ಸಹಿಗಳನ್ನು ನಿಪಿ-1(ಎ) ರಿಂದ 3(ಎ) ಎಂದು ಗುರುತಿಸಲಾಯಿತು. ಫೋಟೋಗಳನ್ನು ಸಿಡಿ ಮತ್ತು ಪ್ರಮಾಣಪತ್ರದೊಂದಿಗೆ ನಿಪಿ-4 ರಿಂದ 10 ಎಂದು ಗುರುತಿಸಲಾಯಿತು. ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಎರಡು ಬಾಟಲ್ ಗಳ ಮೇಲೆ ತಮ್ಮ ಸಹಿಗಳನ್ನು ಗುರುತಿಸಿ ಸದರಿ ಬಾಟಲ್ ಗಳ ಬಗ್ಗೆ ತಮಗೆ ಯಾವುದೇ ಮಾಹಿತಿ ಇಲ್ಲ ಎಂದು ನುಡಿಯುತ್ತಾರೆ. ಸದರಿ ಬಾಟಲ್ ಗಳನ್ನು ಎಂ.ಒ.1 ಮತ್ತು 2, ಸಾಕ್ಷಿಯ ಸಹಿಗಳನ್ನು ಎಂ.ಒ.1(ಎ) ಮತ್ತು 2(ಎ) ಎಂದು ಗುರುತಿಸಲಾಯಿತು.

6 ತಿಂಗಳ ಹಿಂದೆ ನಾನು ಮತ್ತು ನನ್ನ ತಂದೆ ಚಾಸಾ-2 ರವರು ಮೂಡಿಗೆರೆ ಪೇಟೆಗೆ ಬಂದಿದ್ದಾಗ ಅಬಕಾರಿ ಅಧಿಕಾರಿಗಳು ನಮ್ಮ ಸಹಿಗಳನ್ನು ಪಡೆದು, ಫೋಟೋಗಳನ್ನು ತೆಗೆದಿದ್ದಾರೆ. ಯಾವ ವಿಚಾರಕ್ಕೆ ನಮ್ಮ ಸಹಿಯನ್ನು ಪಡೆದು ಫೋಟೋಗಳನ್ನು ತೆಗೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ನಾನು ಸಹಿ ಮಾಡುವ ಕಾಲಕ್ಕೆ ಎಂ.ಒ.1 ಮತ್ತು 2 ರ ವಸ್ತುವನ್ನು ನೋಡಿಲ್ಲ. ನಿಪಿ-1 ರಿಂದ 3 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಅಬಕಾರಿ ಅಧಿಕಾರಿಗಳು ನನ್ನ ಸಮಕ್ಷಮ ಏನನ್ನು ವಶಕ್ಕೆ ಪಡೆದಿಲ್ಲ. ನಾನು ಅಬಕಾರಿ ಅಧಿಕಾರಿಗಳ ಮುಂದೆ ನನ್ನ ಹೇಳಿಕೆಯನ್ನು ದಾಖಲಿಸಿಕೊಂಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಫ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

<u>ಪಾಟೀ ಸವಾಲು: ಫ್ರಾಜ್ಞ್ಯಾ.ಸ.ಸ.ಅ. ರವರಿಂದ:</u>

ಈಗ ಓದಿ ಹೇಳಿದಂತೆ ದಿ.11.04.2025 ರಂದು ಅಬಕಾರಿ ಅಧಿಕಾರಿಗಳ ಮುಂದೆ ನನ್ನ ಹೇಳಿಕೆ ದಾಖಲಿಸಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಪಿ-11 ಎಂದು ಗುರುತಿಸಲಾಯಿತು.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.**
**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.